**ಕುಡಿಯುವ ನೀರಿನ ತೊಂದರೆ**

**270(551); ಶ್ರೀ ಮಾನಪ್ಪ ಡಿ. ವಜ್ಜಲ್ (ಲಿಂಗಸುಗೂರು)**

ಅ) ರಾಯಚೂರು ಜಿಲ್ಲೆಯಲ್ಲಿನ ಗ್ರಾಮಾಂತರ ಪ್ರದೇಶಗಳಲ್ಲಿ ಕುಡಿಯುವ ನೀರಿನ ತೊಂದರೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಕುಡಿಯುವ ನೀರು ಪೂರೈಸಲು ಸರ್ಕಾರ ಕೈಗೊಂಡಿರುವ ಕ್ರಮಗಳೇನು (ತಾಲ್ಲೂಕುವಾರು ವಿವರ ನೀಡುವುದು);

ಆ) ಹಾಗಿದ್ದಲ್ಲಿ, ಜಿಲ್ಲೆಯ ಯಾವ ಯಾವ ಪ್ರಮುಖ ಕೆರೆಗಳಿಂದ ಸುತ್ತಮುತ್ತಲ ಕೆರೆಗಳಿಗೆ ನೀರು ತುಂಬಿಸಲು ಸರ್ಕಾರ ಕ್ರಮ ಕೈಗೊಂಡಿದೆಯೇ; (ಕೆರೆಗಳವಾರು ವಿವರ ನೀಡುವುದು);

ಇ) ಜಿಲ್ಲೆಯ ಪ್ರಮುಖ ಕೆರೆಗಳಿಂದ ಸುತ್ತಮುತ್ತಲ ಕೆರೆಗಳಿಗೆ ನೀರು ತುಂಬಿಸಲು ತಾಂತ್ರಿಕ ಮಂಜೂರಾತಿಯನ್ನು ನೀಡುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಯಾವ ಮಾನದಂಡಗಳನ್ನು ಆಧರಿಸಿ ತಾಂತ್ರಿಕ ಮಂಜೂರಾತಿ ನೀಡಲಾಗುವುದು;

ಈ) ಹಾಗಿದ್ದಲ್ಲಿ, ತಾಂತ್ರಿಕ ಮಂಜೂರಾತಿ ದೊರಕಿದ್ದರೂ ಸಹ ಇದುವರೆವಿಗೂ ನೀರು ತುಂಬಿಸುವ ಪ್ರಕ್ರಿಯೆ ಪ್ರಾರಂಭವಾಗದಿರಲು ಕಾರಣಗಳೇನು; ಸರ್ಕಾರ ಈಗಲಾದರೂ ಕೆರೆಗಳಿಗೆ ನೀರು ತುಂಬಿಸಲು ಕ್ರಮ ಕೈಗೊಳ್ಳುವುದೇ?

**ಶ್ರೀ ಎಚ್.ಕೆ. ಪಾಟೀಲ್ (ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರು)**

ಅ) ರಾಯಚೂರು ಜಿಲ್ಲೆಯಲ್ಲಿನ ಗ್ರಾಮಾಂತರ ಪ್ರದೇಶದಲ್ಲಿರುವ ಒಟ್ಟು 1460 ಜನವಸತಿಗಳಲ್ಲಿನ 255 ಜನವಸತಿಗಳಲ್ಲಿ ಕುಡಿಯುವ ನೀರಿನ ತೊಂದರೆ ಇರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಜಿಲ್ಲೆ ವ್ಯಾಪ್ತಿಯ ಗ್ರಾಮೀಣ ಪ್ರದೇಶಗಳಲ್ಲಿನ ಸಮಸ್ಯಾತ್ಮಕ ಗ್ರಾಮಗಳಲ್ಲಿ ಆದ್ಯತೆಯನುಸಾರ ಕುಡಿಯುವ ನೀರಿನ ಕಾಮಗಾರಿಗಳನ್ನು

ಅನುಷ್ಠಾನಗೊಳಿಸಲು NRDWP ಯೋಜನೆಯಡಿ 2014–15ನೇ ಸಾಲಿನಲ್ಲಿ **ರೂ. 16335.27** ಲಕ್ಷಗಳಿಗೆ ಸರ್ಕಾರದಿಂದ ಅನುಮೋದನೆ ದೊರೆತಿದ್ದು, ಕಾಮಗಾರಿಗಳು ಪ್ರಗತಿಯಲ್ಲಿರುತ್ತದೆ. ವಿವರಗಳು ಈ ಕೆಳಕಂಡಂತಿವೆ.

| ಕ್ರ.ಸಂ. | ತಾಲ್ಲೂಕು | ಕೈಗೊಳ್ಳಲಾಗಿರುವ ಕಾಮಗಾರಿಗಳ ವಿವರ | ಪೂರ್ಣಗೊಂಡಿರುವ ಕಾಮಗಾರಿಗಳ | ಪ್ರಗತಿಯಲ್ಲಿರುವ ಅನುಷ್ಠಾನಗೊಳ್ಳುತ್ತಿರುವ ಕಾಮಗಾರಿಗಳ ಸಂಖ್ಯೆ |
|---|---|---|---|---|
| 1 | ದೇವದುರ್ಗ | 547 | 32 | 515 |
| 2 | ಲಿಂಗಸೂರು | 505 | 17 | 488 |
| 3 | ಮಾನ್ವಿ | 491 | 25 | 466 |
| 4 | ರಾಯಚೂರು | 321 | 8 | 313 |
| 5 | ಸಿಂಧನೂರು | 343 | 4 | 339 |
| | ಒಟ್ಟು | **2207** | **86** | **2121** |

ಆ), ಇ) ಮತ್ತು ಈ) ರಾಯಚೂರು ಜಿಲ್ಲೆಯ ವ್ಯಾಪ್ತಿಯಲ್ಲಿ 40 ಹೆಕ್ಟೇರ್‌ಗಿಂತ ಕಡಿಮೆ ವಿಸ್ತೀರ್ಣವುಳ್ಳ 216 ಸಣ್ಣ ನೀರಾವರಿ ಕೆರೆಗಳಿದ್ದು, ಪ್ರಸಕ್ತ ಸಾಲಿನಲ್ಲಿ ಇಲಾಖಾ ವತಿಯಿಂದ ಸದರಿ ಕೆರೆಗಳಿಗೆ ನೀರು ತುಂಬಿಸುವ ಯಾವುದೇ ಕಾರ್ಯಕ್ರಮ ಇರುವುದಿಲ್ಲ.

40 ಹೆಕ್ಟೇರ್‌ಗಿಂತ ಹೆಚ್ಚಿನ ವಿಸ್ತೀರ್ಣವುಳ್ಳ ಕೆರೆಗಳ ಕಾಮಗಾರಿಗಳನ್ನು ಜಲಸಂಪನ್ಮೂಲ ಇಲಾಖೆ / ಸಣ್ಣ ನೀರಾವರಿ ಇಲಾಖೆ ಕೈಗೊಳ್ಳುತ್ತೇವೆ. ಸಾಮಾನ್ಯವಾಗಿ ಗ್ರಾಮೀಣ ನೀರು ನೈರ್ಮಲ್ಯ ಇಲಾಖೆ ಇಂತಹ ಕಾಮಗಾರಿಗಳನ್ನು ಕೈಗೊಳ್ಳುವುದಿಲ್ಲ.